# ದಾವಣಗೆರೆ ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಶಿವಗಂಗೋತ್ರಿ, ದಾವಣಗೆರೆ-577007
ಫ್ಯಾಕ್ಸ್: 08192-208008 ದೂರವಾಣಿ ಸಂಖ್ಯೆ: 08192-208029

ಸಂಖ್ಯೆ:ದಾವಿವಿ/ಮಾಸನಿ/209/2026-27 |2195 ದಿನಾಂಕ: 07.08.2026

## -: ಅಧಿಸೂಚನೆ :-

ವಿಷಯ: ಅತಿಥಿ ಉಪನ್ಯಾಸಕರು/ಬೋಧನಾ ಸಹಾಯಕರ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಸಂದರ್ಶನ ನಡೆಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 05.08.2026

******

ವಿಶ್ವವಿದ್ಯಾನಿಲಯದ ಘಟಕ ಕಾಲೇಜು ದೃಶ್ಯಕಲಾ ಮಹಾವಿದ್ಯಾಲಯ ದಾವಣಗೆರೆ ಇಲ್ಲಿನ ಈ ಕೆಳಕಂಡ ಸ್ನಾತಕ ಪದವಿ ವಿಷಯಗಳಿಗೆ 2026-27ನೇ ಶೈಕ್ಷಣಿಕ ಸಾಲಿನ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರು / ಬೋಧನಾ ಸಹಾಯಕರುಗಳನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಯುಜಿಸಿ ನಿಯಮಗಳನುಸಾರ (**Ph.D., NET/SLET**) ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳು ದಿನಾಂಕ:13.08.2026 ರಂದು ಪೂರ್ವಾಹ್ನ 11.00ಕ್ಕೆ ವಿಶ್ವವಿದ್ಯಾನಿಲಯದ ಕೇಂದ್ರ ಕಾರ್ಯಾಲಯ, ಶಿವಗಂಗೋತ್ರಿ, ಕ್ಯಾಂಪಸ್ (ತೋಳಹುಣಸೆ) ಇಲ್ಲಿ ಏರ್ಪಡಿಸಲಾಗಿರುವ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ. ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ/ಅನುಭವಕ್ಕೆ ಹಾಗೂ ಮೀಸಲಾತಿಗೆ ಸಂಬಂಧಿಸಿದ ಮೂಲ ದಾಖಲಾತಿಗಳು ಹಾಗೂ ಅದರ ಒಂದು ಸೆಟ್ ಜೆರಾಕ್ಸ್ ಪ್ರತಿಯೊಂದಿಗೆ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ.

| ಕ್ರ.ಸಂ | ಘಟಕ ಕಾಲೇಜು | ಸ್ನಾತಕ ಪದವಿ ಕೋರ್ಸ್‌ಗಳು |
|---|---|---|
| 01 | ವಿಶ್ವವಿದ್ಯಾನಿಲಯದ ಘಟಕ ಕಾಲೇಜು ದೃಶ್ಯಕಲಾ ಮಹಾವಿದ್ಯಾಲಯ ದಾವಣಗೆರೆ | ಅನ್ವಯಿಕ ಕಲೆ, ಚಿತ್ರಕಲೆ, ಶಿಲ್ಪಕಲೆ, ಅನಿಮೇಷನ್ ವಿಭಾಗ ಮತ್ತು ಹಿಂದಿ |

ಮೇಲ್ಕಾಣಿಸಿದ ಸ್ನಾತಕ ಪದವಿ ವಿಷಯಗಳಿಗೆ ಅತಿಥಿ ಉಪನ್ಯಾಸಕರು/ಬೋಧನಾ ಸಹಾಯಕರುಗಳನ್ನು ನೇಮಕ ಮಾಡುವ ಅಥವಾ ಮಾಡದಿರುವ ಅಧಿಕಾರವನ್ನು ವಿಶ್ವವಿದ್ಯಾನಿಲಯವು ಹೊಂದಿರುತ್ತದೆಯೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ತತ್ಸಂಬಂಧ ಆಗಮಿಸುವ ಅಭ್ಯರ್ಥಿಗಳಿಗೆ ವಿಶ್ವವಿದ್ಯಾನಿಲಯದಿಂದ ಯಾವುದೇ ರೀತಿಯ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ಪಾವತಿಸಲಾಗುವುದಿಲ್ಲ.

ಆದೇಶಾನುಸಾರ

ಕುಲಸಚಿವರು
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ-577007

ಸಾರ್ವಜನಿಕ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್ ಸೈಟ್ ಹಾಗೂ ಸೂಚನಾ ಫಲಕಗಳಿಗೆ.

Scanned with CamScanner